**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ. ರವರ ನ್ಯಾಯಾಲಯ, ಟಿ.ನರಸೀಪುರ**

**ಸಿ.ಸಿ ಸಂಖ್ಯೆ : 238/2026**

**ಪಿರ್ಯಾದಿ** : ರಾಜ್ಯದ ಪರವಾಗಿ ತಲಕಾಡು ಪೋಲೀಸ್ ಠಾಣೆ,

**ವಿರುದ್ಧ**

**ಆರೋಪಿಗಳು** : ನಂಜುಂಡನಾಯಕ.ಹೆಚ್.ಎಸ್ ಃಉಃ ರಾಚಯ್ಯ,
ಬಿನ್ ಲೇಟ್ ಸಿದ್ದಪ್ಪ, 30 ವರ್ಷ,
ವಾಸಃ ಹೊಸ ಹೆಮ್ಮಿಗೆ ಗ್ರಾಮ, ತಲಕಾಡು ಹೋಬಳಿ,
ಟಿ.ನರಸೀಪುರ ತಾಲ್ಲೂಕು, ಮೈಸೂರು ಜಿಲ್ಲೆ.

**ಆಪಾದನೆ**

**ಶ್ರೀಮತಿ ನಿವೇದಿತಾ ಎನ್. 1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯಾದ ನಾನು ಆರೋಪಿಯಾದ ನಿಮ್ಮ ವಿರುದ್ಧ ಮಾಡುವ ಆಪಾದನೆ ಏನೆಂದರೆ,**

ದಿಃ 07/08/2025 ರಂದು ಮಧ್ಯಾಹ್ನ 3.30 ಗಂಟೆ ಸಮಯದಲ್ಲಿ ತಲಕಾಡು ಪೊಲೀಸ್ ಠಾಣಾ ಸರಹದ್ದಿಗೆ ಸೇರಿದ, ಹೊಸ ಹೆಮ್ಮಿಗೆ ಗ್ರಾಮದ ಬಸವೇಶ್ವರ ದೇವಸ್ಥಾನದ ಬಳಿ ಹೊಸ ಹೆಮ್ಮಿಗೆ ಗ್ರಾಮಕ್ಕೆ ಹೋಗುವ ರಸ್ತೆಯಲ್ಲಿ, ಆರೋಪಿಯಾದ ನೀವು ನಂಬರ್ ಪ್ಲೇಟ್ ಇಲ್ಲದ ಟಿವಿಎಸ್ ಕಂಪನಿಯ XL ಮೋಟಾರ್ ಸೈಕಲ್ ನಲ್ಲಿ ಕಾವೇರಿ ನಂದಿಯಿಂದ ಮರಳನ್ನು ಕಳ್ಳತನ ಮಾಡಿ 5 ಸಿಮೆಂಟ್ ಚೀಲದಲ್ಲಿ ತುಂಬಿಕೊಂಡು ಸರ್ಕಾರಕ್ಕೆ ಯಾವುದೇ ರಾಜಧನವನ್ನು ಪಾವತಿಸದೇ ಅಕ್ರಮವಾಗಿ ಸಾಗಾಣಿಕೆ ಮಾಡುತ್ತಿದ್ದು, ಆ ಮೂಲಕ ಭಾರತೀಯ ನ್ಯಾಯ ಸಂಹಿತೆಯ ಕಲಂ.303(2) ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞತೆಯಲ್ಲಿ ಎಸಗಿರುತ್ತೀರಿ ಎಂದು ಅಪಾದಿಸಲಾಗಿದೆ.

ಪ್ರಶ್ನೆ: ಈಗ ಓದಿ ಹೇಳಿದ ದೋಷಾರೋಪಣೆಯನ್ನು ಅರ್ಥಮಾಡಿಕೊಂಡಿರುವಿರಾ?

ಉತ್ತರಃ

ಪ್ರಶ್ನೆಃ ಮೇಲೆ ಹೇಳಿದ ಆರೋಪಣೆಯನ್ನು ಒಪ್ಪಿಕೊಳ್ಳುವಿರಾ? ಅಥವಾ ವಿಚಾರಣೆಯಾಗಬೇಕಾ?

ಉತ್ತರಃ

(ಈ ಮೇಲ್ಕಂಡ ದೋಷಾರೋಪಣೆಯನ್ನು ಆರೋಪಿಗೆ ತಿಳಿದ ಭಾಷೆಯಲ್ಲಿ ತೆರೆದ ನ್ಯಾಯಾಲಯದಲ್ಲಿ ಓದಿ ವಿವರಿಸಿದ ನಂತರ ಅವರು ನೀಡಿದ ಉತ್ತರವನ್ನು ನಾನು ನನ್ನ ಸ್ವಂತ ಬರಹದಲ್ಲಿ ದಾಖಲು ಮಾಡಿರುತ್ತೇನೆಂದು ಈ ಮೂಲಕ ದೃಢೀಕರಿಸುತ್ತೇನೆ)

ದಿಃ 17-02-2026

**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು**
**ಮತ್ತು ಪ್ರ. ದ. ನ್ಯಾ ದಂ., ಟಿ.ನರಸೀಪುರ.**

ಪ್ರಕರಣವನ್ನು ಕರೆಯಲಾಯಿತು. ಆರೋಪಿಯು ಹಾಜರಿದ್ದು ದೋಷಾರೋಪಣಾ ಪತ್ರವನ್ನು ಒದಗಿಸಲಾಯಿತು. ಆರೋಪಣೆಯನ್ನು ಆರೋಪಿಗೆ ಓದಿ ಹೇಳಲಾಗಿ, ಅರ್ಥೈಸಿಕೊಂಡು ತಮ್ಮ ತಪ್ಪನ್ನು ಒಪ್ಪಿಕೊಂಡಿರುಸತ್ತಾರೆ. ಅವರ ತಪ್ಪೊಪ್ಪಿಗೆಯು ಸ್ವ-ಇಚ್ಛೆಯಿಂದ ಕೂಡಿದ್ದೆಂದು ಮನವರಿಕೆಯಾಗಿದೆ.

ಆದ್ದರಿಂದ ಭಾರತೀಯ ನ್ಯಾಯ ಸಂಹಿತೆ ಕಲಂ.303(2) ರ ಅಡಿಯಲ್ಲಿ ಶಿಕ್ಷಾರ್ಹವಾದ ಅಪರಾಧಕ್ಕೆ ಆರೋಪಿಗೆ ಶಿಕ್ಷೆ ವಿಧಿಸಿದ್ದು ರೂ.1,000/- ದಂಡವನ್ನು ಪಾವತಿಸತಕ್ಕದ್ದು ಎಂದು ಆದೇಶಿಸಿರುತ್ತೇನೆ.

**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು**
**ಮತ್ತು ಪ್ರ. ದ. ನ್ಯಾ ದಂ., ಟಿ.ನರಸೀಪುರ.**